ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 21-6-2017

# ಮಾಧ್ಯಮ ಮುಖ್ಯಸ್ಥರ ಗಮನಕ್ಕೆ

ಜುಲೈ ಮಾಹೆಯಲ್ಲಿ ರಾಷ್ಟ್ರಪತಿ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಮತಗಟ್ಟೆ ವರದಿಗೆ ಆಗಮಿಸುವ ಮಾಧ್ಯಮ ಪ್ರತಿನಿಧಿಗಳಿಗೆ ಮುಖ್ಯ ಚುನಾವಣಾ ಕಛೇರಿಯಿಂದ ರಹದಾರಿ ಪತ್ರವನ್ನು ನೀಡಲಾಗುವುದು.

ಆದ್ದರಿಂದ ರಹದಾರಿ ಪತ್ರವನ್ನು ಪಡೆಯುವ ಸಲುವಾಗಿ ಜೂನ್ 24 ರೊಳಗೆ ತಮ್ಮ ಮಾಧ್ಯಮ ಪ್ರತಿನಿಧಿಯ ಹೆಸರನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ನೋಂದಾಯಿಸುವ ಜೊತೆಗೆ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಎರಡು ಭಾವಚಿತ್ರಗಳನ್ನು ನೀಡಬೇಕು.

**ವಿಶೇಷ ಸೂಚನೆ:** ಮಾಧ್ಯಮ ಪ್ರತಿನಿಧಿಗಳ ವಿವರವನ್ನು ಭಾವಚಿತ್ರದೊಂದಿಗೆ ಮುಂಚಿತವಾಗಿ ಕೇಂದ್ರ ಚುನಾವಣಾ ಕಛೇರಿಗೆ ಕಳುಹಿಸಿ ಅನುಮತಿ ಪಡೆಯುವುದು ಕಡ್ಡಾಯವಾಗಿರುವ ಕಾರಣ ನಿಗದಿತ ದಿನಾಂಕದ ನಂತರ ಹೆಸರನ್ನು ನೋಂದಾಯಿಸಿಕೊಳ್ಳಲಾಗುವುದಿಲ್ಲ. ರಹದಾರಿ ಪತ್ರಕ್ಕೆ ರಾಜ್ಯ ಮತ್ತು ರಾಷ್ಟ್ರಮಟ್ಟದ ದಿನಪತ್ರಿಕೆ ಮತ್ತು ಸುದ್ದಿವಾಹಿನಿಗಳ ಒಬ್ಬ ವರದಿಗಾರರು ಮತ್ತು ಒಬ್ಬ ಛಾಯಾಗ್ರಾಹಕರಿಗೆ ಮಾತ್ರ ಅವಕಾಶವಿರುತ್ತದೆ.

ವಿಧಾನಪರಿಷತ್ತಿನಲ್ಲಿ ಇಂದು:

ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ವಿಧೇಯ 2017 ರನ್ನು ವಿಧಾನ ಪರಿಷತ್ತಿನಲ್ಲಿ ಒಮ್ಮತದಿಂದ ಅಂಗೀಕೃತವಾಯಿತು.

ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ, ಕರ್ನಾಟಕ ವೈದ್ಯಕೀಯ ಕೋರ್ಸುಗಳನ್ನು ಪೂರ್ಣಗೊಳಿಸಿದ ಅಭ್ಯರ್ಥಿಗಳ ಕಡ್ಡಾಯ ಸೇವಾ ತರಬೇತಿ (ತಿದ್ದುಪಡಿ) ವಿಧೇಯಕ, 2017 ರನ್ನು ವಿಧಾನ ಪರಿಷತ್ತಿನಲ್ಲಿ ಒಮ್ಮತದಿಂದ ಅಂಗೀಕೃತವಾಯಿತು.

ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ 2017 ರನ್ನು ವಿಧಾನ ಪರಿಷತ್ತಿನಲ್ಲಿ ಒಮ್ಮತದಿಂದ ಅಂಗೀಕೃತವಾಯಿತು. ಈ ಕಾಯ್ದೆಯ ಪ್ರಕಾರ ಕುಲಪತಿಗಳ ನಿವೃತ್ತಿಯ ವಯಸ್ಸು 65 ರಿಂದ 67 ಕ್ಕೆ ಮಾಡುವುದು.

ಎಸ್‌ಎಂ:ಜೆಡಿ:ಜಿಪಿಆರ್.

## ವಿಧಾನಸಭೆಯಲ್ಲಿ ಇಂದು:

ರೈತರ ಸಾಲಮನ್ನಾ:

ಸಹಕಾರಿ ಬ್ಯಾಂಕ್‌ಗಳಲ್ಲಿ ರೈತರು ಪಡೆದಿರುವ ಕೃಷಿ ಸಾಲದಲ್ಲಿ (ದಿನಾಂಕ: 20-06-2017 ರವರೆಗೆ ಬಾಕಿ ಉಳಿಸಿಕೊಂಡಿರುವಂತೆ) ರೂ 50,000 ಮನ್ನಾ ಮಾಡಲಾಗುವುದು ಎಂದು ಪ್ರಕಟಿಸಿದ ಮುಖ್ಯಮಂತ್ರಿಗಳು ಸದರಿ ಸಾಲ ಮನ್ನಾದಿಂದ ರಾಜ್ಯ ಸರ್ಕಾರಕ್ಕೆ 165 ಕೋಟಿ ಹೊರೆಯಾಗಲಿದ್ದು, 22,27,500 (22.275 ಲಕ್ಷ) ರೈತರಿಗೆ ಅನುಕೂಲವಾಗುವುದೆಂದರು.

2017ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕಗಳನ್ನು ಮಂಡಿಸುವ ಮುನ್ನ ಸದನದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರು 2017-18 ನೇ ಸಾಲಿನ ಆಯವ್ಯಯ ಜನಪರವಾಗಿದ್ದು, ರೈತರು ಮತ್ತು ತಳಸಮುದಾಯದವರನ್ನು ಮುಖ್ಯವಾಹಿನಿಗೆ ತರುವ ಸದುದ್ದೇಶ ಹೊಂದಿದೆ. ಸರ್ವರಿಗೂ ಸಮಪಾಲು ಮತ್ತು ಸರ್ವರಿಗೂ ಸಮಬಾಳು ಎಂಬ ತತ್ವದಡಿ ಆರ್ಥಿಕ ಮತ್ತು ಸಾಮಾಜಿಕ ಬದಲಾವಣೆಯಾಗಬೇಕೆಂಬುದು ಸರ್ಕಾರದ ಆಶಯವಾಗಿದೆ ಎಂದರು.

2016-17ನೇ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ 139 ತಾಲ್ಲೂಕುಗಳು, ಹಿಂಗಾರು ಹಂಗಾಮಿನಲ್ಲಿ 160 ತಾಲ್ಲೂಕುಗಳು ಬರಪೀಡಿತವಾಗಿದ್ದು ಸರ್ಕಾರ ಸಮರೋಪಾದಿಯಲ್ಲಿ ಬರ ನಿರ್ವಹಣೆ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುತ್ತದೆ. ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿಗೆ ಹೆಚ್ಚು ಆದ್ಯತೆ ನೀಡಲಾಗಿದೆ. ಉದ್ಯೋಗ ಖಾತ್ರಿ ಯೋಜನೆಯಡಿ 9.14 ಕೋಟಿ ಮಾನವ ದಿನಗಳನ್ನು ಸೃಷ್ಠಿ ಮಾಡಲಾಗಿದೆ. ಕೃಷಿ ವಿಮಾ ಯೋಜನೆಯಡಿ 1685 ಕೋಟಿ ಪರಿಹಾರವನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ.

1 ಕೋಟಿ 2 ಲಕ್ಷ ಮಕ್ಕಳಿಗೆ ಕ್ಷೀರಭಾಗ್ಯ ಯೋಜನೆಯಡಿ 5 ದಿನ ಹಾಲು ನೀಡಲಾಗುತ್ತಿದೆ. 1.10 ಕೋಟಿ ಬಿ.ಪಿ.ಎಲ್. ಕಾರ್ಡುದಾರರಿಗೆ ತಲಾ 7 ಕೆ.ಜಿ.ಯಂತೆ ಅಕ್ಕಿ ವಿತರಿಸಲಾಗುತ್ತಿದೆ. ರೈತರಿಗೆ ಪ್ರತಿ ಲೀಟರ್ ಹಾಲಿಗೆ ಸಹಾಯಧನವನ್ನು 5 ರೂ. ಗಳಿಗೆ ಹೆಚ್ಚಿಸಿದ್ದು, 8.5 ಲಕ್ಷ ರೈತ ಕುಟುಂಬಗಳಿಗೆ ಉಪಯೋಗವಾಗಿದೆ.

ಕೃಷಿ ಉತ್ಪನ್ನಗಳ ಆನ್‌ಲೈನ್ ಮಾರುಕಟ್ಟೆ ರೂಪಿಸಿರುವ ನಮ್ಮ ರಾಜ್ಯ ದೇಶದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ.

1-4-2015 ರಿಂದ ಆತ್ಮಹತ್ಯೆ ಮಾಡಿಕೊಂಡ ರೈತ ಕುಟುಂಬಗಳಿಗೆ ತಲಾ 5 ಲಕ್ಷ ಪರಿಹಾರ, ಮೃತರ ಪತ್ನಿಗೆ ರೂ 2000 ಮಾಸಾಶನ ಮತ್ತು ಮಕ್ಕಳಿಗೆ ಉಚಿತ ಶಿಕ್ಷಣ ನೀಡಲಾಗುತ್ತಿದೆ. ಅಂಗನವಾಡಿಯಲ್ಲಿ ಕಲಿಯುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಮಕ್ಕಳಿಗೆ ಹೆಚ್ಚುವರಿಯಾಗಿ ಮೊಟ್ಟೆ ನೀಡಲಾಗುತ್ತಿತ್ತು. ಅಂಗನವಾಡಿಯ ಎಲ್ಲಾ ಮಕ್ಕಳಿಗೂ ತಾರತಮ್ಯವಿಲ್ಲದೆ ಮೊಟ್ಟೆ ನೀಡುವಂತೆ ಕೋರಿಕೆ ಬಂದ ಹಿನ್ನೆಲಯಲ್ಲಿ ಎಲ್ಲಾ ಮಕ್ಕಳಿಗೂ ಈ ಸೌಲಭ್ಯವನ್ನು ವಿಸ್ತರಿಸಲಾಗುವುದೆಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸದನದಲ್ಲಿ ಮಂಡಿಸಿದ 2017ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ-2) ವಿಧೇಯಕ ಮತ್ತು 2017 ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ-3) ವಿಧೇಯಕಗಳು ಸದನದಲ್ಲಿ ಪರ್ಯಾಲೋಚನೆಗೊಂಡು ಅಂಗೀಕಾರವಾದವು.

2017 ನೇ ಸಾಲಿನ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ವಿಧಾನಸಭೆಯಲ್ಲಿ ಅಂಗೀಕರಿಸಲಾಯಿತು.

ಮಾರ್ಚ್ 31, 2016 ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರು ನೀಡಿರುವ ಕರ್ನಾಟಕದಲ್ಲಿನ ರಾಷ್ಟ್ರೀಯ ಉದ್ಯಾನವನಗಳು ಮತ್ತು ವನ್ಯಜೀವಿ ಧಾಮಗಳ ಆಡಳಿತ ನಿರ್ವಹಣೆಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ ವರದಿಯನ್ನು (2017ನೇ ವರ್ಷದ ವರದಿ ಸಂಖ್ಯೆ -6) ಮುಖ್ಯಮಂತ್ರಿಗಳು ಸಭೆಯ ಮುಂದಿಟ್ಟರು.

ಕ್ಯಾತಸಂದ್ರ ಎನ್. ರಾಜಣ್ಣ, ಅಧ್ಯಕ್ಷರು ಸರ್ಕಾರಿ ಭರವಸೆಗಳ ಸಮಿತಿ ಅವರು 2016-17 ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ 9 ನೇ ವರದಿಯನ್ನು ಒಪ್ಪಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

## ಸಾಲ ಮನ್ನಾ - ಸಚಿವ ಈಶ್ವರ ಖಂಡ್ರೆ ಸ್ವಾಗತ

**ಬೆಂಗಳೂರು, ಜೂನ್ 21 (ಕರ್ನಾಟಕ ವಾರ್ತೆ)**

ರೈತರು ಪಡೆದಿದ್ದ ಬೆಳೆ ಸಾಲದ ಪೈಕಿ 50 ಸಾವಿರ ರೂ. ಅಲ್ಪಾವದಿ ಸಾಲ ಮನ್ನಾ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿರ್ಧಾರವನ್ನು ಪೌರಾಡಳಿತ ಮತ್ತು ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವ ಈಶ್ವರ ಬಿ. ಖಂಡ್ರೆ ಅವರು ಸ್ವಾಗತಿಸಿದ್ದಾರೆ.

ಮುಖ್ಯಮಂತ್ರಿಗಳ ಈ ನಿರ್ಧಾರದಿಂದ ಸಹಕಾರಿ ಬ್ಯಾಂಕ್‌ಗಳಲ್ಲಿ ಜೂನ್ 20 ರವರೆಗೆ ಸಾಲ ಪಡೆದಿರುವ 22.27 ಲಕ್ಷ ಮಂದಿ ರೈತರಿಗೆ ಅನುಕೂಲವಾಗಲಿದ್ದು, ರಾಜ್ಯ ಸರ್ಕಾರ 8167 ಕೋಟಿ ರೂ. ಹಣವನ್ನು ಸಹಕಾರಿ ಬ್ಯಾಂಕ್‌ಗಳಿಗೆ ಭರಿಸಲಿದೆ.

ರಾಜ್ಯ ಸರ್ಕಾರ ಸಹಕಾರ ಬ್ಯಾಂಕುಗಳಲ್ಲಿ ರೈತರ ಪಡೆದಿರುವ ಸಾಲಗಳನ್ನು ಮನ್ನಾ ಮಾಡಿದ ಮಾದರಿಯಲ್ಲೆ, ಕೇಂದ್ರ ಸರ್ಕಾರ ಕೂಡ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರು ಪಡೆದಿರುವ ಸಾಲವನ್ನು ಮನ್ನಾ ಮಾಡುವಂತೆ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

## ಸಹಕಾರ ಸಂಘಗಳ ಮೂಲಕ ರೈತರು ಪಡೆದಿರುವ 50,000 ರೂ. ಒಳಗಿನ ಎಲ್ಲಾ ಬಗೆಯ ಸಾಲ ಮನ್ನಾ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು, ಜೂನ್ 21 (ಕರ್ನಾಟಕ ವಾರ್ತೆ)**

ಸಹಕಾರ ಸಂಘಗಳ ಮೂಲಕ ರೈತರು ಜೂನ್ 20ರವರೆಗೆ ಪಡೆದಿರುವ 50,000 ರೂ. ಒಳಗಿನ ಅಲ್ಪಾವದಿ ಸಾಲವನ್ನು ಮನ್ನಾ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಘೋಷಣೆ ಮಾಡಿದರು.

ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕೃಷಿ ಇಲಾಖೆ ಇಂದು ಏರ್ಪಡಿಸಿದ್ದ ರಾಜ್ಯ ಮಟ್ಟದ ಕೃಷಿ ಪಂಡಿತ್ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಮುಖ್ಯಮಂತ್ರಿ ಅವರು ಹಲವು ದಿನಗಳಿಂದ ರೈತರು ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಪಡೆದಿರುವ ಅಲ್ಪಾವಧಿ ಸಾಲ ಮನ್ನಾ ಮಡಬೇಕು ಎಂದು ಒತ್ತಾಯ ಮಾಡುತ್ತಿದ್ದರು. ರೈತರ ಬೇಡಿಕೆಗೆ ಸ್ಪಂದಿಸಿ ನಮ್ಮ ಸರ್ಕಾರ ರೈತರು ಪಡೆದಿರುವ ಅಲ್ಪಾವದಿ ಸಾಲವನ್ನು ಮನ್ನಾ ಮಾಡಲು ನಿರ್ಧಾರ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಅವರು ತಿಳಿಸಿದರು.

ಸಹಕಾರ ಸಂಘಗಳ ಮೂಲಕ ರೈತರು 10,736 ಕೋಟಿ ರೂಪಾಯಿ ಅಲ್ಪಾವಧಿ ಸಾಲ ಪಡೆದಿದ್ದಾರೆ. ಅದರಲ್ಲಿ 50,000 ರೂ. ಒಳಗಿನ ಸಾಲ 8165 ಕೋಟಿ ರೂ. ರೂಪಾಯಿಗಳನ್ನು ಮನ್ನಾ ಮಾಡಿದ್ದು ಇದರಿಂದ ರಾಜ್ಯದ 22.27 ಲಕ್ಷ ರೈತರಿಗೆ ಅನುಕೂಲವಾಗಲಿದೆ. ರಾಜ್ಯ ಸರ್ಕಾರ ರೈತರ ಸಂಕಷ್ಟಗಳಿಗೆ ಸದಾ ಸ್ಪಂದಿಸಿದೆ ಅದರಂತೆ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ರೈತರು ಪಡೆದಿರುವ ಸಾಲವನ್ನು ಕೇಂದ್ರ ಸರ್ಕಾರ ಮನ್ನಾ ಮಾಡುವಂತೆ ಒತ್ತಾಯ ಮಾಡಿದರು.

ರಾಜ್ಯದಲ್ಲಿ ಸತತ 6 ವರ್ಷಗಳಿಂದ ಬರಗಾಲವಿದ್ದು ರೈತರು ಬೆಳೆ ಇಲ್ಲದೆ ಸಂಕಷ್ಟದಲ್ಲಿದ್ದಾರೆ. ಕೇಂದ್ರ ಸರ್ಕಾರ ಅವರ ನೆರವಿಗೆ ಬರಬೇಕು. ಕೇಂದ್ರ ಸರ್ಕಾರ ಹಾಗೂ ಕೇಂದ್ರ ಹಣಕಾಸು ಸಚಿವರು ರೈತರು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಪಡೆದಿರುವ ಸಾಲವನ್ನು ಮನ್ನಾ ಮಾಡಲು ಸಾಧ್ಯವಿಲ್ಲವೆಂದು ಹೇಳಿದ್ದಾರೆ ಇದು ಸರಿಯಾದ ಕ್ರಮ ಅಲ್ಲ. ಇದೀಗ ರಾಜ್ಯ ಸರ್ಕಾರ ರೈತರ ಸಾಲ ಮನ್ನಾ ಮಾಡಿದೆ ಅದೇ ರೀತಿ ಕೇಂದ್ರ ಸರ್ಕಾರವೂ ಸಾಲ ಮನ್ನಾ ಮಾಡಬೇಕು ಎಂದು ತಿಳಿಸಿದರು.

**ಕೃಷಿ ಪಂಡಿತ್ ಪ್ರಶಸ್ತಿಗೆ ಬಾಜನರಾದ 101 ರೈತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ನೀಡಿ ಅಭಿನಂದನೆ ಸಲ್ಲಿಸಿದರು.**

**ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ರೈತರಿಗೆ ಒದಗಿಸಿರುವ ಹಲವು ಯೋಜನೆಗಳಿಗೆ ಸಂಬಂಧಿಸಿದಂತೆ ಮಾತನಾಡಿದರು. ಪಶುಸಂಗೋಪನೆ ಹಾಗೂ ರೇಷ್ಮೆ ಸಚಿವ ಎ. ಮಂಜು , ಶಾಸಕರುಗಳು ಕೃಷಿ ಪಂಡಿತ್ ಪ್ರಶಸ್ತಿ ಭಾಜನರು ಅಧಿಕಾರಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.**

## ದಾಖಲಾತಿಗಳ ಪರಿಶೀಲನೆ

**ಬೆಂಗಳೂರು, ಜೂನ್ 21 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 4–2–2016 ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ ಸಾರಿಗೆ ಇಲಾಖೆಯಲ್ಲಿನ ಮೋಟಾರು ವಾಹನ ನಿರೀಕ್ಷಕರ 127+23 (ಹೈ.ಕ.) ಹುದ್ದೆಗಳ ನೇಮಕಾತಿಗೆ 2 ನೇ ಹಂತದಲ್ಲಿ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯನ್ನು 30–6–2017 ರಂದು ಬೆಳಿಗ್ಗೆ 9–30 ಮತ್ತು ಮಧ್ಯಾಹ್ನ 2–30 ಘಂಟೆಗೆ ಆಯೋಗದ ಕೇಂದ್ರ ಕಛೇರಿ, ಉದ್ಯೋಗ ಸೌಧ, ಬೆಂಗಳೂರು ಇಲ್ಲಿ ನಡೆಸಲಾಗುವುದು.

ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರವನ್ನು ಈಗಾಗಲೇ ಕಳುಹಿಸಲಾಗಿದೆ. ಆಹ್ವಾನಿಸಲಾದ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಿದ್ದು, ಸಂಬಂಧಿತರಿಗೆ ಎಸ್.ಎಂ.ಎಸ್./ಇ–ಮೇಲ್ ಮೂಲಕವು ಮಾಹಿತಿ ನೀಡಲಾಗುವುದು. ಸದರಿ ಪಟ್ಟಿಯನ್ನು ವೆಬ್‌ಸೈಟ್ http://kpsc.kar.nic.in ನಲ್ಲಿ ನೋಡಬಹುದು. ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರ ತಲುಪದೆ ಇದ್ದಲ್ಲಿ ಮೂಲ ದಾಖಲೆಗಳ ಪರಿಶೀಲನೆ ದಿನಾಂಕಕ್ಕೆ ಮುನ್ನ ಆಯೋಗದ ಕೇಂದ್ರ ಕಛೇರಿಯನ್ನು ಸಂಪರ್ಕಿಸಲು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.